**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/01/ಇಎಪಿ/2018

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ:23-01-2019

**ಸುತ್ತೋಲೆ**

ವಿಷಯ: 2009-10ನೇ ಸಾಲಿನಲ್ಲಿ ಡಿಪ್ಲೋಮ ಕೋರ್ಸ್‌ಗಳಿಗೆ ಮೊದಲನೆ ವರ್ಷಕ್ಕೆ ಪ್ರವೇಶ ಪಡೆದ ಹಾಗೂ 2011-12 ಮತ್ತು 2012-13 ನೇ ಸಾಲಿನಲ್ಲಿ ಡಿಪ್ಲೋಮ ಕೋರ್ಸ್‌ಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ ಎರಡನೇ ವರ್ಷಕ್ಕೆ ಪ್ರವೇಶ ಪಡೆದ ಐ.ಟಿ.ಐ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ ನೀಡುವ ಕುರಿತು.

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ: ಇಡಿ 148 ಟಿಪಿಇ 2018 ದಿನಾಂಕ:02-11-2018
2. ಈ ಕಛೇರಿ ಹಿಂಬರಹ ಸಂಖ್ಯೆ: ಬಿಟಿಇ 01/ಇಎಪಿ/2018 ದಿನಾಂಕ:03-11-2018

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಪತ್ರದ ಅನ್ವಯ 2009-10ನೇ ಸಾಲಿನಲ್ಲಿ ಡಿಪ್ಲೋಮ ಕೋರ್ಸ್‌ಗಳಿಗೆ ಮೊದಲನೇ ವರ್ಷಕ್ಕೆ ಪ್ರವೇಶಪಡೆದ ಹಾಗೂ 2011-12 ಮತ್ತು 2012-13 ನೇ ಸಾಲಿನಲ್ಲಿ ಡಿಪ್ಲೋಮ ಕೋರ್ಸ್‌ಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ ಎರಡನೇ ವರ್ಷಕ್ಕೆ ಪ್ರವೇಶ ಪಡೆದ ಐ.ಟಿ.ಐ ವಿದ್ಯಾರ್ಥಿಗಳಿಗೆ 2018 ರ ನವೆಂಬರ್/ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆ ಮತ್ತು 2019 ಏಪ್ರಿಲ್/ಮೇ ಸೆಮಿಸ್ಟರ್ ಪರೀಕ್ಷೆಗಳನ್ನು ಬರೆಯಲು ಕೊನೆಯ ಅವಕಾಶ ಕಲ್ಪಿಸಲಾಗಿತ್ತು.

ಸದರಿ ವಿಷಯವನ್ನು ಉಲ್ಲೇಖ(2)ರ ಈ ಕಛೇರಿ ಹಿಂಬರಹದಲ್ಲಿ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ ತಿಳಿಸಲಾಗಿತ್ತು. ಆದ್ದರಿಂದ ಮೇಲೆ ತಿಳಿಸಲಾದ ವಿದ್ಯಾರ್ಥಿಗಳಿಗೆ 2019ರ ಏಪ್ರಿಲ್/ಮೇ ಸೆಮಿಸ್ಟರ್ ಪರೀಕ್ಷೆ ಬರೆಯಲು ಕೊನೆಯ ಅವಕಾಶವಾಗಿರುತ್ತದೆ ಎಂದು ತಿಳಿಸಲಾಗಿದೆ. ಈ ವಿಷಯವನ್ನು ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಹಾಗೂ ಸಂಬಂಧಪಟ್ಟ ವಿದ್ಯಾರ್ಥಿ/ಪೋಷಕರ ಗಮನಕ್ಕೆ ತರಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಎಲ್ಲಾ ಪಾಲಿಟೆಕ್ನಿಕ್ ಪ್ರಿನ್ಸಿಪಾಲರುಗಳಿಗೆ ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದಲ್ಲಿನ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿ ಮತ್ತು ಮುಂದಿನ ಅಗತ್ಯ ಕ್ರಮಕ್ಕಾಗಿ.

ಪ್ರತಿ,

1) ಇ – ಗವರ್ನೆನ್ಸ್ ವಿಭಾಗಕ್ಕೆ – ವೆಬ್ ಸೈಟ್‌ನಲ್ಲಿ ಪ್ರಕಟಿಸಲು
2) ಗಣಕ ಕೇಂದ್ರಕ್ಕೆ – ವೆಬ್ ಸೈಟ್‌ನಲ್ಲಿ ಪ್ರಕಟಿಸಲು
3) ಕಾರ್ಯದರ್ಶಿಯವರ ಆಪ್ತ ಶಾಖೆ
4) ಕಡತಕ್ಕೆ

ಕರ್ನಾಟಕ ಸರ್ಕಾರ

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/01/ಇಎಪಿ/2018

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ:23-01-2019

**ಸುತ್ತೋಲೆ**

ವಿಷಯ: 2010-11ನೇ ಸಾಲಿನಲ್ಲಿ ಡಿಪ್ಲೋಮ ಕೋರ್ಸ್‌ಗಳಿಗೆ ಮೊದಲನೆ ವರ್ಷಕ್ಕೆ ಪ್ರವೇಶ ಪಡೆದ ಹಾಗೂ 2013-14 ನೇ ಸಾಲಿನಲ್ಲಿ ಡಿಪ್ಲೋಮ ಕೋರ್ಸ್‌ಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ ಎರಡನೇ ವರ್ಷಕ್ಕೆ ಪ್ರವೇಶ ಪಡೆದ ಐ.ಟಿ.ಐ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ ನೀಡುವ ಕುರಿತು.

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ: ಇಡಿ 178 ಟಿಪಿಇ 2009 ದಿನಾಂಕ:01-08-2009

***********

ಉಲ್ಲೇಖಿತ ಸರ್ಕಾರಿ ಆದೇಶದ ಕ್ರಮ ಸಂಖ್ಯೆ(5) ರಲ್ಲಿ ತಿಳಿಸಿರುವಂತೆ ಮೂರು ವರ್ಷದ ಡಿಪ್ಲೋಮವನ್ನು ಒಬ್ಬ ವಿದ್ಯಾರ್ಥಿಯು ಗರಿಷ್ಠವಾಗಿ ಒಂಭತ್ತು ವರ್ಷಗಳಲ್ಲಿ (ಮೂರು ವರ್ಷದ ಡಿಪ್ಲೋಮ ಅವಧಿಯ ಮೂರುಪಟ್ಟು) ಹಾಗೂ ಲ್ಯಾಟರಲ್ ಎಂಟ್ರಿ ಮುಖಾಂತರ ಎರಡನೇ ವರ್ಷಕ್ಕೆ ಪ್ರವೇಶ ಪಡೆದ ಐ.ಟಿ.ಐ ವಿದ್ಯಾರ್ಥಿಯು ಆರು ವರ್ಷಗಳಲ್ಲಿ (ಎರಡು ವರ್ಷದ ಡಿಪ್ಲೋಮ ಅವಧಿಯ ಮೂರು ಪಟ್ಟು) ಪೂರ್ಣಗೊಳಿಸದಿದ್ದ ಪಕ್ಷದಲ್ಲಿ ಅಂತಹ ವಿದ್ಯಾರ್ಥಿಯು ಡಿಪ್ಲೋಮ ಪದವಿಯನ್ನು ಪಡೆಯಲು ಅನರ್ಹ ಎಂದು ಪರಿಗಣಿಸಲ್ಪಟ್ಟಿದೆ.

ಪ್ರಯುಕ್ತ 2010-11ನೇ ಸಾಲಿನಲ್ಲಿ ಡಿಪ್ಲೋಮ ಕೋರ್ಸ್‌ಗಳಿಗೆ ಮೊದಲನೆ ವರ್ಷಕ್ಕೆ ಪ್ರವೇಶ ಪಡೆದ ಹಾಗೂ 2013-14 ನೇ ಸಾಲಿನಲ್ಲಿ ಡಿಪ್ಲೋಮ ಕೋರ್ಸ್‌ಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ ಎರಡನೇ ವರ್ಷಕ್ಕೆ ಪ್ರವೇಶ ಪಡೆದ ಐ.ಟಿ.ಐ ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು 2019ರ ಏಪ್ರಿಲ್/ಮೇ ಸೆಮಿಸ್ಟರ್ ಪರೀಕ್ಷೆಯು ಕೊನೆಯ ಅವಕಾಶವಾಗಿರುತ್ತದೆ. ಈ ವಿಷಯವನ್ನು ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಹಾಗೂ ಸಂಬಂಧಪಟ್ಟ ವಿದ್ಯಾರ್ಥಿ/ಪೋಷಕರ ಗಮನಕ್ಕೆ ತರಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಎಲ್ಲಾ ಪಾಲಿಟೆಕ್ನಿಕ್ ಪ್ರಿನ್ಸಿಪಾಲರುಗಳಿಗೆ ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದಲ್ಲಿನ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿ ಮತ್ತು ಮುಂದಿನ ಅಗತ್ಯ ಕ್ರಮಕ್ಕಾಗಿ.

ಪ್ರತಿ,
1) ಇ – ಗವರ್ನೆನ್ಸ್ ವಿಭಾಗಕ್ಕೆ – ವೆಬ್ ಸೈಟ್‌ನಲ್ಲಿ ಪ್ರಕಟಿಸಲು
2) ಗಣಕ ಕೇಂದ್ರಕ್ಕೆ – ವೆಬ್ ಸೈಟ್‌ನಲ್ಲಿ ಪ್ರಕಟಿಸಲು
3) ಕಾರ್ಯದರ್ಶಿಯವರ ಆಪ್ತ ಶಾಖೆ
4) ಕಡತಕ್ಕೆ